# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583104

ಕುಲಸಚಿವರು(ಮೌಲ್ಯಮಾಪನ) ದೂರವಾಣಿ: 08392-241011


ಸಂಖ್ಯೆ:ವಿಶ್ರೀಕೃವಿಬ/ಪರೀಕ್ಷಾ ವಿಭಾಗ/ಸು.ಅ/2021-22/571 ದಿನಾಂಕ: 01.09.2021

## ಸುವರ್ಣಾವಕಾಶದ ಪರೀಕ್ಷೆ ಅಧಿಸೂಚನೆ

**ವಿಷಯ:** ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪದವಿ ಪೂರ್ಣಗೊಳಿಸಲು ಸುವರ್ಣಾವಕಾಶ (Golden Chance) ಪರೀಕ್ಷೆ ಕುರಿತು.

**ಉಲ್ಲೇಖ**
1 ಸಾಮಾನ್ಯ ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆ ದಿನಾಂಕ:29.03.2021
2 ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆ ದಿನಾಂಕ: 30.03.2021
3 ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆ ದಿನಾಂಕ: 12.08.2021
4 ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 28.08.2021

****

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ದಶಮಾನೋತ್ಸವದ ಅಂಗವಾಗಿ ವಿವಿಧ ಸ್ನಾತಕ (ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ, ಬಿ.ಎಸ್.ಡಬ್ಲ್ಯೂ, ಬಿ.ಇಡಿ, ಬಿ.ಪಿ.ಇಡಿ,), ಸ್ನಾತಕೋತ್ತರ (ಎಂ.ಎ, ಎಂ.ಎಸ್ಸಿ, ಎಂ.ಕಾಂ, ಎಂ.ಎಡ್, ಎಂ.ಪಿ.ಎಡ್, ಎಂ.ಎಸ್.ಡಬ್ಲ್ಯೂ, ಎಂ.ಬಿ.ಎ) ಹಾಗೂ ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆದು ತಮ್ಮ ಪದವಿಗಳನ್ನು ನಿಗದಿತ ಅವಧಿಯ ಒಳಗಾಗಿ ಪೂರ್ಣಗೊಳಿಸದೆ ಪದವಿ ಪ್ರದಾನತೆಯಿಂದ ವಂಚಿತರಾದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯವು ಒಂದು ಸುವರ್ಣಾವಕಾಶ (Golden Chance) ವನ್ನು ಕಲ್ಪಿಸುತ್ತಿದೆ. ಆಯಾ ಅವಧಿಗೆ ಸಂಬಂಧಿಸಿದ ಪಠ್ಯಕ್ರಮದ ಪ್ರಕಾರ ವಿವಿಧ ಸೆಮಿಸ್ಟರ್ ಪರೀಕ್ಷೆಗಳನ್ನು ನವೆಂಬರ್/ಡಿಸೆಂಬರ್ 2021ರಲ್ಲಿ ನಡೆಸಲು ತಿರ್ಮಾನಿಸಲಾಗಿದೆ. ಈ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ಸೂಕ್ತ ಅರ್ಜಿಗಳನ್ನು ಆನ್‌ಲೈನ್(Online) ಮೂಲಕ ಸಲ್ಲಿಸಲು ಈ ಕೆಳಗಿನಂತೆ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

| ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕಗಳು | | | ಪ್ರತಿ ಸೆಮಿಸ್ಟರ್ ಪರೀಕ್ಷೆಗೆ ಪರೀಕ್ಷಾ ಶುಲ್ಕ |
|---|---|---|---|
| 01 | ದಂಡ ರಹಿತವಾಗಿ | 06.09.2021 ರಿಂದ 25.09.2021ರ ವರೆಗೆ | ರೂ. 5000/- |
| 02 | ದಂಡ ಸಹಿತವಾಗಿ | 26.09.2021 ರಿಂದ 30.09.2021ರ ವರೆಗೆ | ರೂ. 5000+500 ಪ್ರತಿ ದಿನಕ್ಕೆ |

**ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರು/ವಿಭಾಗಗಳ ಮುಖ್ಯಸ್ಥರು/ಪರೀಕ್ಷಾರ್ಥಿಗಳಿಗೆ ಸೂಚನೆಗಳು :**

1. ಪರೀಕ್ಷಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು http://student.logisys.org/vskub/ ನಲ್ಲಿ login ಆಗಿ ನೋಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ, ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ, ಶುಲ್ಕ ಭರಿಸಿದ ನಂತರ ಪ್ರತಿಯನ್ನು ತಕ್ಷಣ ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯಗಳಲ್ಲಿ ಸಲ್ಲಿಸಬೇಕು.
2. ಈ ಪರೀಕ್ಷೆಗೆ ಅರ್ಜಿಗಳನ್ನು ಹಾರ್ಡ್ ಕಾಪಿ ಮೂಲಕ ವಿಶ್ವವಿದ್ಯಾಲಯವು ಸ್ವೀಕರಿಸುವುದಿಲ್ಲ.
3. ಈ ಪರೀಕ್ಷೆಯ ಶುಲ್ಕದಲ್ಲಿ ಯಾವ ವರ್ಗಕ್ಕೂ ವಿನಾಯಿತಿ ಇರುವುದಿಲ್ಲ.
4. ಪರೀಕ್ಷಾ ಶುಲ್ಕವನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಗಳನ್ನು ಯಾವದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ ಮತ್ತು ಕೊನೆಯ ದಿನಾಂಕದ ನಂತರ ಅರ್ಜಿಗಳನ್ನು ಸ್ವೀಕರಿಸುವ ವ್ಯವಸ್ಥೆ ಇರುವುದಿಲ್ಲ.
5. ಸುವರ್ಣಾವಕಾಶ ಪರೀಕ್ಷಾ ಕೇಂದ್ರವು ಬಳ್ಳಾರಿ ಆಗಿರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳ ನೊಂದಣಿ ಆದರೆ ಮಾತ್ರ ಒಂದು ಕೇಂದ್ರವನ್ನು ಹೆಚ್ಚುವರಿಯಾಗಿ ಕೊಪ್ಪಳದಲ್ಲಿ ಸ್ಥಾಪಿಸಲಾಗುವುದು.

ಕುಲಸಚಿವರು(ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ